## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಗ್ರಾಮ ಪಂಚಾಯತ್ ಗ್ರಂಥಾಲಯಗಳ ಪರಿಣಾಮಕಾರಿ ನಿರ್ವಹಣೆಗೆ ರಾಜ್ಯ ಹಾಗೂ ಗ್ರಾಮ ಪಂಚಾಯತ್ ಮಟ್ಟದ ಸಲಹಾ ಸಮಿತಿಗಳನ್ನು ರಚಿಸುವ ಬಗ್ಗೆ.

**ಪ್ರಸ್ತಾವನೆ:**

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವಾಲಯದ ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಗ್ರಾಮ ಪಂಚಾಯತ್ ಗ್ರಂಥಾಲಯಗಳನ್ನು ಇತ್ತೀಚೆಗೆ ಗ್ರಾಮ ಪಂಚಾಯತಿಗಳ ವತಿಯಿಂದ ನಿರ್ವಹಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಶಕ್ಕೆ ನೀಡಲಾಗಿದೆ. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಗ್ರಂಥಾಲಯಗಳಿಗೆ ಮೂಲ ಸೌಕರ್ಯಗಳನ್ನು ಹೆಚ್ಚಿಸಿ, ಹೊಸ ಪುಸ್ತಕಗಳು, ಕಂಪ್ಯೂಟರ್‌ಗಳು, ಪುಸ್ತಕ ಕಪಾಟುಗಳು, ಪೀಠೋಪಕರಣಗಳು ಮುಂತಾದ ಸೌಕರ್ಯಗಳನ್ನು ಒದಗಿಸಲು ಹಾಗೂ ಗ್ರಾಮದ ಯುವಕರು ಯುವತಿಯರು, ಗೃಹಿಣಿಯರು, ಹಿರಿಯ ನಾಗರಿಕರುಗಳು ಹಾಗೂ ವಿದ್ಯಾರ್ಥಿಗಳು ಹೆಚ್ಚಿನ ಪ್ರಮಾಣದಲ್ಲಿ ಗ್ರಂಥಾಲಯದ ಸದುಪಯೋಗ ಪಡೆಯುವಂತಾಗಲು ಅವಶ್ಯ ಕ್ರಮಗಳನ್ನು ಕೈಗೊಳ್ಳುವುದು ಅಗತ್ಯವಾಗಿದೆ. ಗ್ರಂಥಾಲಯಗಳು ಗ್ರಾಮ ಪಂಚಾಯತಿ ವ್ಯಾಪ್ತಿಯ ಜ್ಞಾನ ಕೇಂದ್ರಗಳಾಗಿ ಕಾರ್ಯನಿರ್ವಹಿಸಿದ್ದಲ್ಲಿ, ಎಲ್ಲಾ ವರ್ಗದ ಜನರಿಗೆ ಅವಶ್ಯವಿರುವ ಮಾಹಿತಿಗಳು ಸ್ಥಳೀಯವಾಗಿ ದೊರೆಯುವಂತೆ ಮಾಡಬಹುದಾಗಿದೆ. ಗ್ರಾಮ ಪಂಚಾಯತಿಗಳು ತಮ್ಮ ವತಿಯಿಂದ ಈ ಸೌಕರ್ಯಗಳನ್ನು ಒದಗಿಸಲು ಮುತುವರ್ಜಿವಹಿಸಬಹುದಾಗಿದೆ. ಜೊತೆಗೆ ಸ್ಥಳೀಯ ಸಂಘ ಸಂಸ್ಥೆಗಳು, ಗ್ರಾಮದ ಉದ್ಯೋಗಸ್ಥ ವ್ಯಕ್ತಿಗಳು, ವಾಣಿಜ್ಯೋದ್ಯಮಿಗಳಿಂದ ಸಹ ವಂತಿಕೆ ರೂಪದಲ್ಲಿ ಈ ಸೌಲಭ್ಯಗಳನ್ನು ಪಡೆಯಲು ಸಹ ಅವಕಾಶವಿರುತ್ತದೆ.

ಈ ಹಿನ್ನೆಲೆಯಲ್ಲಿ ಗ್ರಾಮೀಣ ಗ್ರಂಥಾಲಯಗಳನ್ನು ಸಂಪೂರ್ಣ ಜನಸ್ನೇಹಿಯಾಗಿಸಲು ಅವಶ್ಯ ಸಲಹೆ, ಮಾರ್ಗದರ್ಶನ ನೀಡಲು ಸರ್ಕಾರ ಹಾಗೂ ಗ್ರಾಮ ಪಂಚಾಯತ್ ಮಟ್ಟದಲ್ಲಿ ಸಲಹಾ ಸಮಿತಿಗಳನ್ನು ರಚಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ 790 ಗ್ರಾಪಂಅ 2019**
**ಬೆಂಗಳೂರು, ದಿನಾಂಕ: 18-02-2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಗ್ರಾಮ ಪಂಚಾಯತ್ ಗ್ರಂಥಾಲಯಗಳ ಪರಿಣಾಮಕಾರಿ ನಿರ್ವಹಣೆಗೆ ರಾಜ್ಯ ಹಾಗೂ ಗ್ರಾಮ ಪಂಚಾಯತ್ ಮಟ್ಟದ ಸಲಹಾ ಸಮಿತಿಗಳನ್ನು ಈ ಕೆಳಕಂಡಂತೆ ರಚನೆ ಮಾಡಿ ಆದೇಶಿಸಿದೆ.

**ಸರ್ಕಾರದ ಮಟ್ಟದ ಸಲಹಾ ಸಮಿತಿ:-**

| | |
|---|---|
| 1) ನಿರ್ದೇಶಕರು (ಪಂ.ರಾಜ್1) | – ಅಧ್ಯಕ್ಷರು |
| 2) ಸಲಹೆಗಾರರು(ಪಂ.ರಾಜ್) | – ಸದಸ್ಯರು |
| 3) ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ | – ಸದಸ್ಯರು |
| 4) ನಿರ್ದೇಶಕರು, ಲೋಕ ಶಿಕ್ಷಣ ನಿರ್ದೇಶನಾಲಯ | – ಸದಸ್ಯರು |
| 5) ಸರ್ಕಾರದಿಂದ ನಾಮನಿರ್ದೇಶಿತರಾದ ಇಬ್ಬರು ಶಿಕ್ಷಣ ತಜ್ಞರು | – ಸದಸ್ಯರು |
| 6) ಸರ್ಕಾರದ ಅಧೀನ ಕಾರ್ಯದರ್ಶಿ(ಪಂ.ರಾಜ್) | – ಸದಸ್ಯ ಕಾರ್ಯದರ್ಶಿ |

**ಗ್ರಾಮ ಪಂಚಾಯತ್ ಮಟ್ಟದ ಸಲಹಾ ಸಮಿತಿ,–**

| | |
|---|---|
| 1) ಗ್ರಾಮ ಪಂಚಾಯತ್ ಅಧ್ಯಕ್ಷರು | – ಅಧ್ಯಕ್ಷರು |
| 2) ಸ್ಥಳೀಯ ಸರ್ಕಾರಿ ಪ್ರೌಢ ಶಾಲೆಯ ಮುಖ್ಯೋಪಾಧ್ಯಾಯರು | – ಸದಸ್ಯರು |
| 3) ಸ್ಥಳೀಯ ಯುವಕ ಮಂಡಳದ ಪ್ರತಿನಿಧಿ | – ಸದಸ್ಯರು |
| 4) ಸ್ಥಳೀಯ ಯುವತಿ ಮಂಡಳದ ಪ್ರತಿನಿಧಿ | – ಸದಸ್ಯರು |
| 5) ಹಿರಿಯ ನಾಗರಿಕರು | – ಸದಸ್ಯರು |
| 6) ಸ್ಥಳೀಯ ಶಿಕ್ಷಣ ತಜ್ಞರು/ಸಾಹಿತಿ | – ಸದಸ್ಯರು |
| 7) ಗ್ರಂಥಾಲಯ ಮೇಲ್ವಿಚಾರಕರು | – ಸಂಚಾಲಕರು |
| 8) ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ | – ಸದಸ್ಯ ಕಾರ್ಯದರ್ಶಿ |

ಗ್ರಾಮ ಪಂಚಾಯತಿ ಮಟ್ಟದ ಸಲಹಾ ಸಮಿತಿಯ ಕ್ರಮ ಸಂಖ್ಯೆ:3, 4, 5, 6 ಕ್ಕೆ ಸಂಬಂಧಿಸಿದಂತೆ ಸದಸ್ಯರುಗಳನ್ನು ಗ್ರಾಮ ಸಭೆಯಲ್ಲಿ ಚರ್ಚಿಸಿ ಆಯ್ಕೆ ಮಾಡಿ ತದನಂತರ ಗ್ರಾಮ ಪಂಚಾಯತಿ ಸಾಮಾನ್ಯ ಸಭೆ ಅನುಮೋದನೆ ಪಡೆಯುವುದು.

ಮೇಲಿನಂತೆ ರಚಿಸಲಾದ ರಾಜ್ಯ ಮಟ್ಟದ ಸಮಿತಿಯು ಆಗಿಂದ್ದಾಗೆಯೇ ಅಂದರೆ, ಕನಿಷ್ಠ ತಿಂಗಳಿಗೊಮ್ಮೆ ಸಭೆ ಸೇರಿ ಗ್ರಾಮ ಪಂಚಾಯತ್ ಗ್ರಂಥಾಲಯಗಳ ಸರ್ವಾಂಗೀಣ ಅಭಿವೃದ್ಧಿಗೆ ಸೂಕ್ತ ಶಿಫಾರಸ್ಸುಗಳನ್ನು ನೀಡಲು ಅಗತ್ಯಪಡಿಸಬಹುದು. ಗ್ರಾಮ ಪಂಚಾಯತ್ ಮಟ್ಟದ ಸಮಿತಿಗಳು ಕನಿಷ್ಠ ತಿಂಗಳಿಗೊಮ್ಮೆ ಸಭೆ ಸೇರಿ ಗ್ರಾಮ ಪಂಚಾಯತಿಗಳ ಸರ್ವಾಂಗೀಣ ಅಭಿವೃದ್ಧಿ ಹಾಗೂ ಪರಿಣಾಮಕಾರಿ ನಿರ್ವಹಣೆಗೆ ಬೇಕಾದ ಕ್ರಮಗಳನ್ನು ಕೈಗೊಳ್ಳಲು ಅಗತ್ಯಪಡಿಸಬಹುದು.

**ರಾಜ್ಯ ಮಟ್ಟದ ಸಮಿತಿಯ ಜವಾಬ್ದಾರಿಗಳು:–**

1) ಗ್ರಂಥಾಲಯಗಳ ಕಟ್ಟಡಗಳು ಪೀಠೋಪಕರಣ, ಕಪಾಟುಗಳ ಸ್ವರೂಪ ಹಾಗೂ ಗುಣಮಟ್ಟದ ಬಗ್ಗೆ ನೀಲಿನಕ್ಷೆ ತಯಾರಿಸುವುದು.
2) ಗ್ರಂಥಾಲಯಗಳಲ್ಲಿ ಯಾವ ಯಾವ ಪುಸ್ತಕಗಳು ಇರಬೇಕೆಂಬ ಬಗ್ಗೆ ಸಲಹೆ ಮಾಡುವುದು.
3) ಗ್ರಂಥಾಲಯಗಳನ್ನು ಡಿಜಿಟಲ್ ಮಾಡಿ ಯಾವ ಯಾವ ಮಾಹಿತಿಗಳು ಇರಬೇಕೆಂಬ ಬಗ್ಗೆ ಸಲಹೆ ನೀಡುವುದು.
4) ಗ್ರಂಥಾಲಯಗಳಲ್ಲಿ ಓದುಗರ ಸಂಖ್ಯೆಯನ್ನು ಹೆಚ್ಚಿಸಲು ಯಾವ ಯಾವ ಕ್ರಮಗಳನ್ನು ಕೈಗೊಳ್ಳಬೇಕೆಂಬ ಬಗ್ಗೆ ಸಲಹೆ ನೀಡುವುದು.
5) ಗ್ರಂಥಾಲಯಗಳಲ್ಲಿ ಓದುಗರ ಜೊತೆ ವಿಷಯವಾರು ಸಂವಾದ ಕಾರ್ಯಕ್ರಮ ಏರ್ಪಡಿಸುವ ಬಗ್ಗೆ ಸಲಹೆ ನೀಡುವುದು.
6) ಗ್ರಂಥಾಲಯದ ಮೇಲ್ವಿಚಾರಕರಿಗೆ ತರಬೇತಿ ವ್ಯವಸ್ಥೆಗೆ ಸಲಹೆ ನೀಡುವುದು.

**ಗ್ರಾಮ ಪಂಚಾಯತ್ ಗ್ರಂಥಾಲಯಗಳ ಸಲಹಾ ಸಮಿತಿ ಜವಾಬ್ದಾರಿಗಳು:–**

1) ಗ್ರಂಥಾಲಯಕ್ಕೆ ಸಮರ್ಪಕ ಕಟ್ಟಡದ ವ್ಯವಸ್ಥೆ ಕಲ್ಪಿಸುವುದು.
2) ಗ್ರಂಥಾಲಯಕ್ಕೆ ಅವಶ್ಯಕ ಪೀಠೋಪಕರಣಗಳು ಲಭ್ಯವಿರುವಂತೆ ಮಾಡುವುದು.
3) ಗ್ರಂಥಾಲಯಕ್ಕೆ ಬೇಕಾದ ಪುಸ್ತಕಗಳನ್ನು ಒದಗಿಸಲು ಕ್ರಮ ಕೈಗೊಳ್ಳುವುದು.
4) ಗ್ರಂಥಾಲಯಕ್ಕೆ ಬೇಕಾದ ದಿನಪತ್ರಿಕೆಗಳು, ನಿಯತಕಾಲಿಕೆಗಳು ಲಭ್ಯವಿರುವಂತೆ ಮಾಡುವುದು.
5) ಗ್ರಂಥಾಲಯಕ್ಕೆ ಬೇಕಾದ ಕಂಪ್ಯೂಟರ್‌ಗಳು ಲಭ್ಯವಿರುವಂತೆ ಮಾಡುವುದು.
6) ಡಿಜಿಟಲ್ ಗ್ರಂಥಾಲಯದಲ್ಲಿ ವ್ಯಾಪಕವಾದ ಮಾಹಿತಿ ಲಭ್ಯವಿರುವಂತೆ ಮಾಡುವುದು.
7) ಗ್ರಂಥಾಲಯಗಳಲ್ಲಿ ಉದ್ಯೋಗ ಮಾಹಿತಿ ದೊರಕುವಂತೆ ಮಾಡುವುದು.
8) ಗ್ರಂಥಾಲಯಗಳಲ್ಲಿ ಓದುಗರೊಡನೆ ವಿಷಯವಾರು ಸಂವಾದ ಏರ್ಪಡಿಸುವುದು.

9) ಗ್ರಂಥಾಲಯಗಳಲ್ಲಿ ಸ್ಥಳೀಯ ಸಾಹಿತಿಗಳು, ಕ್ರಿಡಾಪಟುಗಳು ಹಾಗೂ ಇನ್ನಿತರೆ ಕ್ಷೇತ್ರಗಳ ಸಾಧಕರಿಂದ ಉಪನ್ಯಾಸ ಏರ್ಪಡಿಸುವುದು.

10) ಗ್ರಂಥಾಲಯಗಳ ಓದುಗರಿಗಾಗಿ, ಮುಖ್ಯವಾಗಿ ಮಕ್ಕಳಿಗಾಗಿ ವಿವಿಧ ಸ್ಪರ್ಧಾ ಚಟುವಟಿಕೆ ಏರ್ಪಡಿಸಿ, ವಿಜೇತರಿಗೆ ಬಹುಮಾನ ವ್ಯವಸ್ಥೆ ಕಲ್ಪಿಸುವುದು.

11) ಒಟ್ಟಾರೆ ಗ್ರಂಥಾಲಯಗಳನ್ನು ಸ್ಥಳೀಯ ಜನರಿಗೆ ಅಂದರೆ, ಯುವಕರು, ಯುವತಿಯರು, ಗೃಹಣಿಯರು, ಹಿರಿಯ ನಾಗರಿಕರು, ರೈತರು, ವರ್ತಕರು, ಮುಂತಾಗಿ ಸರ್ವರಿಗೂ ಉಪಯುಕ್ತವಾಗುವಂತೆ ಮಾಡುವುದು.

**ಗ್ರಾಮ ಪಂಚಾಯತಿ ಗ್ರಂಥಾಲಯಗಳ ನಿರ್ವಹಣೆಗೆ ಅನುದಾನ:–**

1) ಗ್ರಂಥಾಲಯ ಲೆಕ್ಕ ಶೀರ್ಷಿಕೆಯಲ್ಲಿ ಸರ್ಕಾರದ ವತಿಯಿಂದ ಬಿಡುಗಡೆ ಮಾಡುವ ಅನುದಾನ ಬಳಸಿಕೊಳ್ಳುವುದು.
2) ಗ್ರಾಮ ಪಂಚಾಯತಿಗಳು ಆಸ್ತಿ ತೆರಿಗೆ ಜೊತೆ ಸಂಗ್ರಹಿಸುವ ಗ್ರಂಥಾಲಯ ಉಪಕರದ ಹಣ ಬಳಸಿಕೊಳ್ಳುವುದು.
3) ಗ್ರಾಮ ಪಂಚಾಯತಿಗಳು ಸ್ವಂತ ಸಂಪನ್ಮೂಲದಿಂದ ಬಳಸಿಕೊಳ್ಳುವುದು.
4) ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ದಾನಿಗಳಿಂದ ಹಣ, ಪುಸ್ತಕ, ಕಂಪ್ಯೂಟರ್, ಪೀಠೋಪಕರಣ ರೂಪದಲ್ಲಿ ನೆರವು ಪಡೆಯುವುದು.

ಗ್ರಾಮ ಪಂಚಾಯತ್ ಮಟ್ಟದ ಸಲಹಾ ಸಮಿತಿಗಳ ಕಾರ್ಯಚಟುವಟಿಕೆಗಳಿಗೆ ತಗಲುವ ಸಾಂದರ್ಭಿಕ ವೆಚ್ಚಗಳನ್ನು ಗ್ರಾಮ ಪಂಚಾಯತ್ ನಿಧಿಯಿಂದ ಭರಿಸಬಹುದಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Naveenkumar 18/2/2020
(ಬಿ. ನವೀನ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ (ಗ್ರಾ.ಪಂ) (ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
18/2/2020

1) ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2) ಎಲ್ಲಾ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
4) ನಿರ್ದೇಶಕರು (ಪಂ.ರಾಜ್–1) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
5) ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಮೈಸೂರು.
6) ಶ್ರೀ ಎಂ.ಕೆ. ಕೆಂಪೇಗೌಡ, ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
7) ನಿರ್ದೇಶಕರು, ಸಾರ್ವಜನಿಕ ಗ್ರಂಥಾಲಯ ಇಲಾಖೆ.
8) ನಿರ್ದೇಶಕರು, ಲೋಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
9) ಉಪನಿರ್ದೇಶಕರು ಹಾಗೂ ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ (ಗ್ರಾ.ಪಂ.) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ ರವರ ಆಪ್ತ ಕಾರ್ಯದರ್ಶಿ.
4. ನಿರ್ದೇಶಕರು (ಪಂ.ರಾಜ್-1), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ರವರ ಆಪ್ತ ಸಹಾಯಕರು.
5. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.